ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೧೬

# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೇಳನೇ ಅಧಿವೇಶನ

## (ಮುಂದುವರೆದ ಉಪವೇಶನ)

## ಮಂಗಳವಾರ, ದಿನಾಂಕ: ೨೪ನೇ ಮಾರ್ಚ್, ೨೦೧೫

---

### ಸಮೂಹ – II

೧. ಇಂಧನ ಸಚಿವರು

೨. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು

೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೪. ಲೋಕೋಪಯೋಗಿ ಸಚಿವರು

೫. ಸಹಕಾರ ಮತ್ತು ಸಕ್ಕರೆ ಸಚಿವರು

೬. ಕೃಷಿ ರಾಜ್ಯ ಸಚಿವರು

---

### ತುಮಕೂರು–ಹೊನ್ನಾವರ ರಸ್ತೆಯ ಉನ್ನತೀಕರಣದ ಬಗ್ಗೆ

ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) – ೨೨೬ (೨೩೫) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಷ್ಟ್ರೀಯ ಹೆದ್ದಾರಿ ಯೋಜನೆಯಡಿ ತುಮಕೂರು–ಹೊನ್ನಾವರ ರಸ್ತೆಯ ಉನ್ನತೀಕರಣವನ್ನು ಯಾವಾಗ ಪ್ರಾರಂಭಿಸಲಾಗಿದೆ; (ಪೂರ್ಣ ವಿವರ ನೀಡುವುದು)

(ಆ) ಇದರ ನಿರ್ವಹಣೆ ಯಾರಿಗೆ ನೀಡಲಾಗಿದೆ; ಯಾವ ಸಂಸ್ಥೆಗೆ ಜವಾಬ್ದಾರಿ ನೀಡಲಾಗಿದೆ; ಯಾವ ಯಾವ ನಗರಗಳಲ್ಲಿ ಬೈಪಾಸ್ ವ್ಯವಸ್ಥೆ ಮಾಡಲಾಗಿದೆ ;

(ಇ) ಈ ರಸ್ತೆಯ ಸಂಪೂರ್ಣ ಹಣಕಾಸು ನಿರ್ವಹಣೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಪಾಲೆಷ್ಟು;

(ಈ) ಯಾವ ಕಾಲಮಿತಿಯೊಳಗೆ ಕಾಮಗಾರಿಯನ್ನು ಮುಕ್ತಾಯಗೊಳಿಸಲಾಗುವುದು ? (ಹಣಕಾಸು ವ್ಯವಸ್ಥೆ ಬಗ್ಗೆ ಕಾಮಗಾರಿವಾರು ಮಾಹಿತಿ ನೀಡುವುದು)

## ಅಕ್ಟ್ರಾಯ್ ತೆರಿಗೆಯ ಬಗ್ಗೆ

ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –

೨೨೭ (೨೩೫೪) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಅಕ್ಟ್ರಾಯ್ ತೆರಿಗೆಯನ್ನು ಯಾವಾಗ ರದ್ದುಗೊಳಿಸಲಾಯಿತು;

(ಆ) ಅಕ್ಟ್ರಾಯ್ ತೆರಿಗೆ ಎಂದರೇನು; ಇದನ್ನು ಯಾವ ಪ್ರದೇಶಗಳಲ್ಲಿ ವಸೂಲಿ ಮಾಡಲಾಗುತ್ತಿತ್ತು;

(ಇ) ಅಕ್ಟ್ರಾಯ್ ಅನುದಾನವನ್ನು ಮರಳಿ ನಗರ ಸ್ಥಳೀಯ ಸಂಸ್ಥೆಗಳಿಗೆ ನೀಡಲಾಗುತ್ತಿತ್ತೇ;

(ಈ) ೧೯೯೪ ರಿಂದ ೧೯೯೬ ರವರೆಗೆ ಅಕ್ಟ್ರಾಯ್ ಅನುದಾನವನ್ನು ಮಧ್ಯಂತರ ಮಂಡಲ್ ಪಂಚಾಯತಿಗಳಿಗೆ ನೀಡಲಾಗಿತ್ತೆ;

(ಉ) ಹಾಗಿದ್ದಲ್ಲಿ, ಈ ಅವಧಿಯಲ್ಲಿ ಅಕ್ಟ್ರಾಯ್ ಅನುದಾನವನ್ನು ಪಡೆದ ಮಧ್ಯಂತರ ಮಂಡಲ್ ಪಂಚಾಯತಿಗಳು ಯಾವುವು;

(ಊ) ಅವುಗಳಿಗೆ ನೀಡಿದ ಅಕ್ಟ್ರಾಯ್ ಅನುದಾನ ಎಷ್ಟು ?

## ಕೃಷಿ ಭಾಗ್ಯ ಯೋಜನೆ

ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –

೨೨೮ (೨೨೮೫) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯ ಸರ್ಕಾರವು ಕೃಷಿ ಭಾಗ್ಯ ಯೋಜನೆಯನ್ನು ಪ್ರಾರಂಭಿಸಿದ್ದು ಯಾವಾಗ; (ಯೋಜನಾವಾರು ವಿವರಗಳನ್ನು ನೀಡುವುದು)

(ಆ) ಈ ಯೋಜನೆಯಡಿ ಒದಗಿಸಲಾಗುವ ಸೌಲಭ್ಯಗಳೇನು; ಚಿಕ್ಕಮಗಳೂರು ಜಿಲ್ಲೆಯ ಎಷ್ಟು ಕೃಷಿ ನಿರತ ರೈತರನ್ನು ಫಲಾನುಭವಿಗಳನ್ನಾಗಿ ಆಯ್ಕೆ ಮಾಡಲಾಗಿದೆ; ಇದಕ್ಕಾಗಿ ಅನುಸರಿಸಲಾಗಿರುವ ಮಾನದಂಡಗಳೇನು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ರೈತ ಸಂಪರ್ಕ ಕೇಂದ್ರಗಳು

ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೨೨೯ (೨೩೮೫) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ರೈತ ಸಂಪರ್ಕ ಕೇಂದ್ರಗಳು ಎಷ್ಟು;

(ಆ) ರೈತ ಸಂಪರ್ಕ ಕೇಂದ್ರಗಳಿಗೆ ಮೂಲಭೂತ ಸೌಲಭ್ಯಗಳು ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ಜಿಲ್ಲೆಯಲ್ಲಿ ರೈತ ಸಂಪರ್ಕ ಕೇಂದ್ರಗಳಿಗೆ ಸಿಬ್ಬಂದಿಗಳನ್ನು ಒದಗಿಸಲಾಗಿದೆಯೇ ?

## ಕೃಷಿ ಉಪಕರಣಗಳ ಖರೀದಿಗೆ ಸಬ್ಸಿಡಿ

ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) –

೨೩೦ (೨೩೩೧) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ರಾಜ್ಯದಲ್ಲಿ ರೈತರಿಗೆ ಉಪಯೋಗವಾಗುವ ಯಾವ ಯಾವ ಸಂಸ್ಥೆಗಳು (ಕಂಪನಿಗಳು) ತಯಾರಿಸಿರುವ ಯಾವ ಯಾವ ಕೃಷಿ ಉಪಕರಣಗಳನ್ನು ಖರೀದಿಸಲು ಸರ್ಕಾರ ಸಬ್ಸಿಡಿ ನೀಡುತ್ತಿದೆ; (ಪ್ರತಿ ಉಪಕರಣದ ಸರಬರಾಜು ಮೊತ್ತ ಸರ್ಕಾರದ ಸಬ್ಸಿಡಿಯ ಮೊತ್ತದ ವಿವರವನ್ನು ನೀಡುವುದು)

(ಆ) ಸರ್ಕಾರದೊಂದಿಗೆ ಸಬ್ಸಿಡಿ ಯೋಜನೆಯಲ್ಲಿ ಪಾಲ್ಗೊಳ್ಳದ ಅಂತರರಾಷ್ಟ್ರೀಯ ಗುಣಮಟ್ಟದ ಕೃಷಿ ಉಪಕರಣಗಳ ಮಾರಾಟ ಮಾಡುತ್ತಿರುವ ತತ್ಸಮಾನ ಉಪಕರಣಗಳ ಬೆಲೆಯು ಸಬ್ಸಿಡಿ ಮಾರಾಟಕ್ಕೆ ದರ ಒಪ್ಪಂದ ಮಾಡಿಕೊಂಡಿರುವ ಸಂಸ್ಥೆಗಳ ದರಕ್ಕಿಂತ ಅತ್ಯಂತ ಕಡಿಮೆ (ಶೇ.೫೦ ಮತ್ತು ಅದಕ್ಕಿಂತ ಕಡಿಮೆ) ದರದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಸಬ್ಸಿಡಿಯನ್ನು ಸಂಪೂರ್ಣವಾಗಿ ನಿಲ್ಲಿಸುವುದರಿಂದ ಸಹಜ, ಸ್ವಾಭಾವಿಕ ಪೈಪೋಟಿಯಿಂದ ಗುಣಮಟ್ಟದ ಮತ್ತು ಕಡಿಮೆ ಬೆಲೆಯ ಉಪಕರಣಗಳು ರೈತರಿಗೆ ದೊರೆಯುವ ಸಾಧ್ಯತೆಯನ್ನು ಸರ್ಕಾರ ಯೋಚಿಸಿದೆಯೇ;

(ಈ) ಇಲ್ಲಿಯವರೆಗೂ ನೀಡಿರುವ ಸಬ್ಸಿಡಿಯ ಹಣ ಸೋರಿಹೋಗಿರುವ ಬಗ್ಗೆ, ದುರುಪಯೋಗವಾಗಿರುವ ಬಗ್ಗೆ ಮಧ್ಯವರ್ತಿಗಳ ಪಾಲಾಗಿರುವ ಬಗ್ಗೆ ತನಿಖೆಗೆ ಸರ್ಕಾರ ಆದೇಶಿಸಬಹುದೇ ?

## ಲೋಕೋಪಯೋಗಿ ಇಲಾಖೆಯಲ್ಲಿ ಹುದ್ದೆಗಳು ಖಾಲಿ ಇದ್ದರೂ ಅಭಿಯಂತರರುಗಳನ್ನು ಬೇರೆ ಇಲಾಖೆಗಳಿಗೆ ಎರವಲು ಸೇವೆಯ ಮೇಲೆ ಕಳುಹಿಸುವ ಬಗ್ಗೆ

ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –

೨೩೧ (೨೩೩೬) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಲೋಕೋಪಯೋಗಿ ಇಲಾಖೆಯಲ್ಲಿ ಖಾಲಿಯಿರುವ ಸಹಾಯಕ ಕಾರ್ಯಪಾಲಕ ಅಭಿಯಂತರರು, ಕಾರ್ಯನಿರ್ವಾಹಕ ಅಭಿಯಂತರರು ಹಾಗೂ ಜೂನಿಯರ್ ಇಂಜಿನಿಯರ್‌ಗಳ ಸಂಖ್ಯೆ ಎಷ್ಟು;

(ಆ) ಲೋಕೋಪಯೋಗಿ ಇಲಾಖೆಯಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಮಹಾನಗರ ಪಾಲಿಕೆ ಹಾಗೂ ಇತರೆ ಇಲಾಖೆಗಳಲ್ಲಿ ಎಷ್ಟು ನೌಕರರು ಎರವಲು ಸೇವೆ ಮೇಲೆ ಕಾರ್ಯನಿರ್ವಹಿಸುತ್ತಿದ್ದಾರೆ; (ಇವರ ಹೆಸರು, ಪದನಾಮ ಮತ್ತು ಸೇವೆ ಸಲ್ಲಿಸುತ್ತಿರುವ ದಿನಾಂಕ ಸಹಿತ ವಿವರ ನೀಡುವುದು)

(ಇ) ಲೋಕೋಪಯೋಗಿ ಇಲಾಖೆಯಲ್ಲಿ ಹುದ್ದೆಗಳು ಖಾಲಿಯಿದ್ದರೂ ಇಲಾಖೆಯ ಅಭಿಯಂತರರುಗಳನ್ನು ಇತರೆ ಇಲಾಖೆಗೆ ಯಾವ ಉದ್ದೇಶದಡಿ ಎರವಲು ಸೇವೆಯ ಮೇಲೆ ಕಳುಹಿಸಲಾಗಿದೆ;

(ಈ) ಇನ್ನೂ ಎಷ್ಟು ವರ್ಷ ಈ ರೀತಿ ಎರವಲು ಸೇವೆಯ ಮೇಲೆ ಕಾರ್ಯ ನಿರ್ವಹಿಸುತ್ತಾರೆ; ಈ ರೀತಿ ಕಳುಹಿಸುವುದರಿಂದ ಸರ್ಕಾರದ ಲಾಭ ನಷ್ಟವೇನು ?

## ವಿದ್ಯುತ್ ಸರಬರಾಜಿಗೆ ಎಕ್ಸ್‌ಪ್ರೆಸ್ ಲೈನ್

ಶ್ರೀ ಎಸ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –

೨೩೨ (೨೩೮೩) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ತುಂಗಭದ್ರಾ ನದಿ ದಂಡೆ ಹಾಗೂ ಕೃಷ್ಣಾ ನದಿ ದಂಡೆಯ ರೈತರ ಪಂಪ್‌ಸೆಟ್‌ಗಳಿಗೆ ಅಗತ್ಯ ವಿದ್ಯುತ್ ಸರಬರಾಜು ಮಾಡಲು ಕೆ.ಪಿ.ಟಿ.ಸಿ.ಎಲ್. ನಿಂದ ಎಕ್ಸ್‌ಪ್ರೆಸ್ ಲೈನ್ ಹಾಕುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಹಾಗಿದ್ದಲ್ಲಿ, ರೈತರ ಪಂಪ್‌ಸೆಟ್‌ಗಳಿಗೆ ಅಗತ್ಯ ವಿದ್ಯುತ್ ಸರಬರಾಜು ಮಾಡಲು ಕೆ.ಪಿ.ಟಿ.ಸಿ.ಎಲ್. ನಿಂದ ಕೈಗೊಂಡ ಕ್ರಮಗಳೇನು ? (ಪೂರ್ಣ ವಿವರ ಒದಗಿಸುವುದು)

## ಸಹಕಾರ ಸಂಘಗಳ ಮೂಲಕ ವಿವಿಧ ಶ್ರೇಣಿಯ ವ್ಯವಸಾಯ ಸಾಲ

ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –

೨೩೩ (೨೨೭೭) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸಹಕಾರ ಇಲಾಖೆಯಲ್ಲಿನ ಸಹಕಾರ ಸಂಘಗಳ ಮೂಲಕ ರೈತರಿಗೆ ವಿವಿಧ ಶ್ರೇಣಿಯ ವ್ಯವಸಾಯ ಸಾಲ ನೀಡುತ್ತಿರುವುದು ನಿಜವೇ;

(ಆ) ಹಾಗಿದ್ದರೆ, ಫಲಾನುಭವಿಗಳ ಸಂಖ್ಯೆ ಎಷ್ಟು; ೨೦೧೪–೧೫ನೇ ಸಾಲಿನಲ್ಲಿ ನೀಡಿರುವ ಸಾಲದ ಮೊತ್ತ ಎಷ್ಟು; (ಶ್ರೇಣಿವಾರು ವಿವರ ಒದಗಿಸುವುದು)

(ಇ) ಸಾಲ ಪಡೆಯಲು ಸರ್ಕಾರದ ಮಾನದಂಡಗಳೇನು; ಸಾಲದ ಮೊತ್ತದ ಬೇಡಿಕೆಯನ್ನು ಯಾವ ಮಾನದಂಡದಲ್ಲಿ ನಿಗದಿಪಡಿಸಲಾಗಿದೆ ? (ವಿವರ ಒದಗಿಸುವುದು)

## ನೌಕರರ ವೇತನ ಹೆಚ್ಚಿಸುವ ಮತ್ತು ಹುದ್ದೆ ಖಾಯಮಾತಿ ಬಗ್ಗೆ

ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೨೩೪ (೨೪೧೩) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ನಗರ ಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತ್ ಸೇರಿದಂತೆ ರಾಜ್ಯದ ಎಲ್ಲಾ ನಗರ, ಸ್ಥಳೀಯ ಸಂಸ್ಥೆಗಳಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಸ್ಥಳೀಯ ಸಂಸ್ಥೆವಾರು, ಜಿಲ್ಲಾವಾರು, ಹುದ್ದೆವಾರು ವಿವರ ನೀಡುವುದು)

(ಆ) ರಾಜ್ಯದ ಎಲ್ಲಾ ನಗರ, ಸ್ಥಳೀಯ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ತಾತ್ಕಾಲಿಕ/ಹಂಗಾಮಿ ನೌಕರರ ಸಂಖ್ಯೆ ಎಷ್ಟು; ಅವರಿಗೆ ನೀಡುತ್ತಿರುವ ವೇತನ ಎಷ್ಟು; (ಸ್ಥಳೀಯ ಸಂಸ್ಥೆವಾರು, ಜಿಲ್ಲಾವಾರು, ಹುದ್ದೆವಾರು ವಿವರ ನೀಡುವುದು)

(ಇ) ಸದರಿ ತಾತ್ಕಾಲಿಕ ನೆಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ವೇತನ ಹೆಚ್ಚಳಕ್ಕಾಗಿ ಮತ್ತು ಹುದ್ದೆ ಖಾಯಮಾತಿಗಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳಾವುವು;

(ಈ) ಇಲ್ಲವಾದಲ್ಲಿ, ಸರ್ಕಾರ ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಿದೆ ಮತ್ತು ಯಾವಾಗ ಕ್ರಮ ಕೈಗೊಳ್ಳಲಾಗುವುದು; ಸಂಪೂರ್ಣ ಮಾಹಿತಿ ನೀಡುವುದು ?

## ಕಬ್ಬಿನ ತೂಕದಲ್ಲಿ ವಂಚಿಸಿದ ಪ್ರಕರಣಗಳು

ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –

೨೩೪ (೨೩೧೨) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸಕ್ಕರೆ ಕಾರ್ಖಾನೆಗಳು ರೈತರಿಂದ ಖರೀದಿಸುವ ಕಬ್ಬಿನ ತೂಕದಲ್ಲಿ ಕಡಿಮೆ ಪ್ರಮಾಣದ ತೂಕ ತೋರಿಸಿ ವಂಚಿಸಿದ್ದ ಪ್ರಕರಣಗಳು ಬೆಳಕಿಗೆ ಬಂದಿವೆಯೇ :

(ಆ) ಅಂತಹ ಸಕ್ಕರೆ ಕಾರ್ಖಾನೆಗಳು ಯಾವುವು; ಯಾರ ಒಡೆತನದಲ್ಲಿ ಸದರಿ ಕಾರ್ಖಾನೆಗಳಿವೆ; ಟನ್ ತೂಕದ ಕಬ್ಬಿನಲ್ಲಿ ಎಷ್ಟು ಪ್ರಮಾಣದ ಕಡಿಮೆ ತೂಕವನ್ನು ಲೆಕ್ಕದಲ್ಲಿ ತೋರಿ ವಂಚಿಸಲಾಗುತ್ತಿತ್ತು;

(ಇ) ಇಂತಹ ಸಕ್ಕರೆ ಕಾರ್ಖಾನೆಗಳ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು; ರೈತರಿಗೆ ಎಫ್‌ಆರ್‌ಪಿ ಪ್ರಕಾರ ದರ ನೀಡದೆ ಇರುವ ಕಾರ್ಖಾನೆಗಳ ಸಕ್ಕರೆ ದಾಸ್ತಾನುಗಳನ್ನು ವಶಪಡಿಸಿಕೊಳ್ಳಲಾಗಿದೆಯೇ:

(ಈ) ಜಪ್ತಿ ಮಾಡಿಕೊಂಡಿರುವ ಗೋದಾಮಿನ ಸಕ್ಕರೆ ಪ್ರಮಾಣ ಎಷ್ಟು; ಈ ನಿಟ್ಟಿನಲ್ಲಿ ರೈತರಿಗೆ ವಂಚನೆಯಾಗದಂತೆ ಸರ್ಕಾರ ಯಾವ ಮುಂಜಾಗ್ರತಾ ಕ್ರಮಗಳನ್ನು ಜರುಗಿಸಲಾಗುವುದು ?

## ಲೋಡ್ ಷೆಡ್ಡಿಂಗ್ ಹಾಗೂ ವಿದ್ಯುತ್ ಖರೀದಿ ಬಗ್ಗೆ

ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) –

೨೩೬ (೨೯೦) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಪ್ರತಿದಿನ ಉಂಟಾಗುವ ವಿದ್ಯುತ್ ಕೊರತೆ ಎಷ್ಟು;

(ಆ) ರಾಜ್ಯದಲ್ಲಿ ವಿದ್ಯುತ್‌ನ್ನು ಹೆಚ್ಚಿನ ಪ್ರಮಾಣದಲ್ಲಿ ಉತ್ಪಾದಿಸಲು ಕೈಗೊಂಡಿರುವ ಕ್ರಮಗಳೇನು;

(ಇ) ಕಳೆದ ೨ ವರ್ಷಗಳಲ್ಲಿ ಹೊರ ರಾಜ್ಯಗಳಿಂದ ಹಾಗೂ ಖಾಸಗಿಯವರಿಂದ ಖರೀದಿಸಿದ ವಿದ್ಯುತ್ ಪ್ರಮಾಣವೆಷ್ಟು ಹಾಗೂ ಯಾವ ದರದಲ್ಲಿ ಖರೀದಿಸಲಾಗಿದೆ;

(ಈ) ಇದಕ್ಕಾಗಿ ನೀಡಿದ ಹಣವೆಷ್ಟು; (ಸಂಪೂರ್ಣ ವಿವರಗಳೊಂದಿಗೆ ಮಾಹಿತಿ ನೀಡುವುದು)

(ಉ) ಹೊರ ರಾಜ್ಯಗಳಿಂದ ೨೦೧೫ರಲ್ಲಿ ಖರೀದಿಸಲು ಉದ್ದೇಶಿಸಿರುವ ವಿದ್ಯುತ್ ಪ್ರಮಾಣವೆಷ್ಟು; ಇದಕ್ಕಾಗಿ ತಗಲುವ ಅಂದಾಜು ಮೊತ್ತವೆಷ್ಟು;

(ಊ) ಪ್ರತಿದಿನ ಉಂಟಾಗುವ ವಿದ್ಯುತ್ ಕೊರತೆ ನೀಗಿಸಲು ಸರ್ಕಾರವು ಲೋಡ್ ಷೆಡ್ಡಿಂಗ್ ಮಾಡಲು ಯೋಚಿಸಿದೆಯೇ; ಯೋಚಿಸಿದ್ದಲ್ಲಿ, ಯಾವ ಯಾವ ಪ್ರದೇಶದಲ್ಲಿ ಎಷ್ಟೆಷ್ಟು ಗಂಟೆಗಳ ಕಾಲ ಲೋಡ್ ಷೆಡ್ಡಿಂಗ್ ಮಾಡಲಾಗುವುದು ?

## ತೆರೆದ ಬಾವಿಗಳ ಸಾಲ ಮನ್ನಾ

ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –

೨೩೭ (೨೯೮) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೋಲಾರ, ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ತೋಡಿರುವ ತೆರೆದ ಬಾವಿಗಳ ಸಂಖ್ಯೆ ಎಷ್ಟು;

(ಆ) ಈ ಬಾವಿಗಳಿಗೆ ಸಹಕಾರ ಸಂಘಗಳಿಂದ ರೈತರು ಪಡೆದಿರುವ ಸಾಲ ಎಷ್ಟು ;

(ಇ) ಈ ಸಾಲವನ್ನು ಮನ್ನಾ ಮಾಡುತ್ತೇವೆಂದು ಸರ್ಕಾರದ ಪರವಾಗಿ ಮಾನ್ಯ ಸಹಕಾರ ಸಚಿವರು ಭರವಸೆ ನೀಡಿದ್ದರೂ ಸಹ ಇನ್ನೂ ಸಾಲ ಮನ್ನಾ ಮಾಡದಿರಲು ಕಾರಣಗಳೇನು ?

## ಬೆಂಗಳೂರಿನಲ್ಲಿ ಸರ್ಕಾರಿ ಮನೆಗಳ ಕೊರತೆ

ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೨೩೮ (೨೩.೨೩) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರಿನಲ್ಲಿರುವ ಸರ್ಕಾರಿ ವಸತಿ ಗೃಹಗಳ ಸಂಖ್ಯೆ ಎಷ್ಟು;

(ಆ) ಬೆಂಗಳೂರಿನಲ್ಲಿ ಕೆಲಸ ನಿರ್ವಹಿಸುತ್ತಿರುವ ಸರ್ಕಾರಿ ನೌಕರರೆಷ್ಟು; ಮತ್ತು ಸರ್ಕಾರಿ ಮನೆಗಳಿಗೆ ಪ್ರಸ್ತುತ ಅರ್ಜಿ ಸಲ್ಲಿಸಿರುವವರ ಸಂಖ್ಯೆ ಎಷ್ಟು; (ವಿವರ ಒದಗಿಸುವುದು)

(ಇ) ಬೆಂಗಳೂರಿನಲ್ಲಿ ಸರ್ಕಾರಿ ವಸತಿ ಗೃಹ (ಗೌರ್ನಮೆಂಟ್ ಕ್ವಾಟ್ರರ್ಸ್) ಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದರೆ, ಏನು ಕ್ರಮ ಕೈಗೊಳ್ಳಲಾಗುವುದು;

(ಉ) ಸರ್ಕಾರಿ ನೌಕರರಿಗೆ ಸರ್ಕಾರಿ ವಸತಿ ಗೃಹವನ್ನು ಹಂಚಿಕೆ ಮಾಡಲು ಇರುವ ಮಾನದಂಡಗಳೇನು ?

## ಸಾವಯುವ ಗೊಬ್ಬರ ತಯಾರಿಕೆ ಮತ್ತು ಬಳಕೆ

ಡಾ: ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –

೨೩೯ (೨೨೭೫) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಸಾಯನಿಕ ಗೊಬ್ಬರಗಳ ಅನಿಯಂತ್ರಿತ ಉಪಯೋಗದಿಂದಾಗಿ ಭೂಮಿಯ ಫಲವತ್ತತೆ ಕುಸಿದು ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸಾವಯುವ ಗೊಬ್ಬರದ ಉತ್ಪಾದನೆ ಮತ್ತು ಬಳಕೆ ಕುರಿತು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು;

(ಇ) ಪ್ರತಿ ಮನೆ ಮತ್ತು ಪ್ರತಿಯೊಂದು ಶಾಲೆಯಲ್ಲಿ ಸಾವಯುವ ಗೊಬ್ಬರ ತಯಾರಿಕೆ ಮತ್ತು ಬಳಕೆ ಮಾಡಲು ಪ್ರೋತ್ಸಾಹಿಸಲಾಗುವುದೇ ?

## ರೈಲ್ವೆ ಹಳಿಗೆ ಮೇಲ್ಸೇತುವೆ

ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೨೪೦ (೨೨೬೯) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹಾಸನ ನೂತನ ಬಸ್ ನಿಲ್ದಾಣದ ಹತ್ತಿರ ಹಾದು ಹೋಗಿರುವ ರೈಲ್ವೆ ಹಳಿಗೆ ಮೇಲ್ಸೇತುವೆ ನಿರ್ಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಆ) ಹಾಸನದ ಎನ್.ಆರ್. ಸರ್ಕಲ್‌ನಿಂದ ನೂತನ ಬಸ್ ನಿಲ್ದಾಣದವರೆಗೆ ಅಧಿಕ ವಾಹನ ದಟ್ಟಣೆಯಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಈ ರಸ್ತೆಯನ್ನು ಅಗಲೀಕರಣ ಮಾಡಲು ಕೈಗೊಂಡಿರುವ ಕ್ರಮಗಳೇನು;

(ಇ) ಹಾಸನದ ರೈಲ್ವೆ ಸ್ಟೇಷನ್‌ನಿಂದ ಡೈರಿ ವೃತ್ತದವರೆಗೆ ಬೀದಿ ದೀಪಗಳಿಲ್ಲದೆ ಸಾರ್ವಜನಿಕರಿಗೆ ತೊಂದರೆಯಾಗಿದ್ದು, ಬೀದಿ ದೀಪ ಅಳವಡಿಸಲು ಕೈಗೊಳ್ಳುವ ಕ್ರಮಗಳೇನು ?

ವಿ. ಶ್ರೀಶ್
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ನಿರ್ದೇಶಕರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. ಕಾಪ್ರಿ 1241– 1500 ಪ್ರತಿಗಳು (ಪಿತಿ)